# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತಮೂರನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಮಂಗಳವಾರ, ದಿನಾಂಕ: 02ನೇ ಫೆಬ್ರವರಿ, 2021**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

### 02. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ:**
ಎಸ್.ಆರ್.ಪಾಟೀಲ್ ಮಾನ್ಯ ವಿರೋಧ ಪಕ್ಷದ ನಾಯಕರು, ಎಂ.ನಾರಾಯಣಸ್ವಾಮಿ, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಕೆ.ಸಿ.ಕೊಂಡಯ್ಯ, ಆರ್.ಬಿ.ತಿಮ್ಮಾಪುರ, ಬಿ.ಕೆ. ಹರಿಪ್ರಸಾದ್, ವಿಜಯ ಸಿಂಗ್ ಆರ್. ಪ್ರಸನ್ನ ಕುಮಾರ್ ಹಾಗೂ ಇತರರು.

ಶಿವಮೊಗ್ಗ ಜಿಲ್ಲೆಯ ಪಶ್ಚಿಮ ಘಟ್ಟಗಳಲ್ಲಿನ ಹುಣಸೋಡು ಗ್ರಾಮದ ಬಳಿಯಲ್ಲಿ ನಡೆಯುತ್ತಿರುವ ಅಕ್ರಮ ಗಣಿಗಾರಿಕೆಗಾಗಿ ಸಂಗ್ರಹಿಸಿದ್ದ ಸ್ಫೋಟಕಗಳಿಂದ ಸಂಭವಿಸಿರುವ ದುರಂತದ ಕುರಿತು

### 03. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲಿನ ಚರ್ಚೆ

"2021ನೇ ಜನವರಿ, 28ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ:29.01.2021ರಂದು **ಶ್ರೀ ಆಯನೂರು ಮಂಜುನಾಥ್** ರವರು ಸೂಚಿಸಿದ ಪ್ರಸ್ತಾವದ ಮೇಲೆ ಚರ್ಚೆ:

...2..

## 04. ಶಾಸನ ರಚನೆ

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ, 2020**
**ಶ್ರೀ ಪ್ರಭು ಬಿ. ಚವ್ಹಾಣ್ ( ಮಾನ್ಯ ಪಶುಸಂಗೋಪನೆ ಸಚಿವರು) ಅವರು:-**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 05. ಗಮನ ಸೆಳೆಯುವ ಸೂಚನೆಗಳು

೦1. **ಶ್ರೀ ಮರಿತಿಬ್ಬೇಗೌಡ** ಅವರು 2019 ರಿಂದ ಮಂಡ್ಯ ಜಿಲ್ಲಾ ಪಂಚಾಯಿತಿಯ ಸಾಮಾನ್ಯ ಸಭೆ ನಡೆಯದೆ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಸಮಗ್ರ ಅಭಿವೃದ್ಧಿ ಕಾರ್ಯಗಳು ಸಂಪೂರ್ಣವಾಗಿ ಸ್ಥಗಿತವಾಗಿರುವುದರಿಂದ ಸರ್ಕಾರದ ಯಾವುದೇ ಅನುದಾನ ಬಳಕೆಯಾಗಿಲ್ಲದಿರುವ ಕುರಿತು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಗಮನ ಸೆಳೆಯುವುದು.

೦2. **ಶ್ರೀ ಪುಟ್ಟಣ್ಣ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ 7ನೇ ಎ.ಐ.ಸಿ.ಟಿ.ಇ. ಪರಿಷ್ಕೃತ ವೇತನ ಶ್ರೇಣಿಯನ್ನು ಇದುವರೆವಿಗೂ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉಪ ಮುಖ್ಯಮಂತ್ರಿಯವರು, ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

೦3. **ಶ್ರೀ ಕೆ.ಹರೀಶ್ ಕುಮಾರ್** ಅವರು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ವಿಧಾನ ಪರಿಷತ್ತಿನ ಶಾಸಕರುಗಳನ್ನು ನಾಮನಿರ್ದೇಶನ ಮಾಡದಿರುವ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

೦4. **ಶ್ರೀ ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು,** ಅವರು ಬೆಂಗಳೂರು ಪೂರ್ವ ತಾಲ್ಲೂಕಿನ ಕೆ.ಆರ್. ಪುರಂ ವಾರ್ಡ್ ಸಂಖ್ಯೆ 53ನೇ ವ್ಯಾಪ್ತಿಯ ಬಸವನಪುರ ಗ್ರಾಮದ ಸರ್ವೆ ನಂ.26/01ರಲ್ಲಿ ನಾಲ್ಕು ಎಕರೆ ವಿಸ್ತೀರ್ಣ ಜಮೀನಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ದಾವೆ ಇದ್ದರು ಜಿಲ್ಲಾಧಿಕಾರಿಗಳು ಕಾನೂನು ಬಾಹಿರವಾಗಿ ಭೂ ಪರಿವರ್ತನೆ ಆದೇಶ ಹೊರಡಿಸಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 06. ನಿಯಮ 330ರ ಮೇರೆಗೆ

೦1. **ಶ್ರೀಯುತರುಗಳಾದ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಕೆ.ಟಿ. ಶ್ರೀಕಂಠೇಗೌಡ ಮತ್ತು ಮರಿತಿಬ್ಬೇಗೌಡ** ಅವರುಗಳು ದಿನಾಂಕ:10.06.2020ರಂದು ಆರ್ಥಿಕ ಇಲಾಖೆಯವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಆಇ/157/ವೆಚ8/2020ನ್ನು ಹಿಂಪಡೆದು ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡುವ ಹಾಗೂ ವೇತನಾನುದಾನಕ್ಕೆ ಒಳಪಡಿಸುವ ವಿಷಯದ ಕುರಿತು ಪ್ರಸ್ತಾಪಿಸುವುದು.

...3..

೦೨. **ಶ್ರೀ ಕೆ.ಸಿ. ಕೊಂಡಯ್ಯ** ಅವರು ಹೈದ್ರಾಬಾದ್-ಕರ್ನಾಟಕ (ಕಲ್ಯಾಣ ಕರ್ನಾಟಕ) ಪ್ರದೇಶಾಭಿವೃದ್ಧಿ ಮಂಡಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸುತ್ತಿರುವ ಅನುದಾನ ಹಾಗೂ ಅದರ ಬಳಕೆ ಕುರಿತು ಪ್ರಸ್ತಾಪಿಸುವುದು.

೦೩. **ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಜಿಲ್ಲೆಯ ಕೆರೆಗಳಿಗೆ ಸಂಸ್ಕರಿಸಿದ ನೀರನ್ನು ತುಂಬಿಸಲು ರೂಪಿಸಿರುವ ಕೆ.ಸಿ.ವ್ಯಾಲಿ ಯೋಜನೆಯಡಿಯಲ್ಲಿ ನೂರಾರು ಕೋಟಿ ರೂಗಳನ್ನು ವೆಚ್ಚ ಮಾಡಿದ್ದರೂ ನಿರೀಕ್ಷಿತ ಪ್ರಮಾಣದಲ್ಲಿ ಕೆರೆಗಳಿಗೆ ನೀರನ್ನು ತುಂಬಿಸಲು ಆಗದಿರುವ ವಿಷಯದ ಕುರಿತು ಪ್ರಸ್ತಾಪಿಸುವುದು.

೦೪. **ಶ್ರೀಯುತರುಗಳಾದ ನಸೀರ್ ಅಹಮದ್, ಎಂ.ನಾರಾಯಣಸ್ವಾಮಿ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು, ಕೆ.ಸಿ.ಕೊಂಡಯ್ಯ, ಪ್ರಕಾಶ್ ಕೆ.ರಾಥೋಡ್ ಮತ್ತು ಮೋಹನ್ ಕುಮಾರ್ ಕೊಂಡಜ್ಜಿ** ಅವರುಗಳು ಕೋಲಾರ ಜಿಲ್ಲೆಯ ಕೆ.ಜಿ.ಎಫ್ ನಗರ ಸಭೆಯ ವ್ಯಾಪ್ತಿಯಲ್ಲಿ ಸುಮಾರು 30-40 ವರ್ಷಗಳಿಂದ ಮಳಿಗೆಗಳನ್ನು ನಿರ್ಮಾಣ ಮಾಡಿ ವ್ಯಾಪಾರ ಮಾಡಿಕೊಂಡು ಬಂದಿರುವ ವ್ಯಾಪಾರಸ್ಥರಿಗೆ ಖಾಯಂ ಆಗಿ ಮಳಿಗೆಗಳನ್ನು ಹಂಚಿಕೆ ಮಾಡುವ ಕುರಿತು ಪ್ರಸ್ತಾಪಿಸುವುದು.

## 07. ನಿರ್ಣಯ

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಆಯನೂರು ಮಂಜುನಾಥ್, ಡಾ: ತಳವಾರ ಸಾಬಣ್ಣ, ಶ್ರೀ ಅರುಣ ಶಹಾಪುರ, ಶ್ರೀ ಎಸ್.ವ್ಹಿ.ಸಂಕನೂರ, ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ವಿಧಾನ ಪರಿಷತ್ತಿನ ಸರ್ಕಾರಿ ಮುಖ್ಯ ಸಚೇತಕರು, ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಹಾಗೂ ಇತರರು ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 165 ಹಾಗೂ ಭಾರತ ಸಂವಿಧಾನದ 183ನೇ ಅನುಚ್ಛೇದದ 'ಸಿ' ಖಂಡದಡಿಯಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಾದ ಶ್ರೀ ಕೆ.ಪ್ರತಾಪಚಂದ್ರ ಶೆಟ್ಟಿ ಅವರನ್ನು ಸಭಾಪತಿ ಸ್ಥಾನದಿಂದ ತೆಗೆದುಹಾಕಬೇಕೆಂದು ನೀಡಿರುವ ನಿರ್ಣಯವನ್ನು ಮಂಡಿಸಲು ಸದನದ ಅನುಮತಿ ಕೋರುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**